# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 262 (94) |
| ಸದಸ್ಯರ ಹೆಸರು | : | ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14.09.2021 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರದ ರಿಂಗ್ ರಸ್ತೆಯ ಉದ್ದಕ್ಕೂ ಅಲ್ಲಲ್ಲಿ ಕಟ್ಟಡ ತ್ಯಾಜ್ಯ, ಕೈಗಾರಿಕಾ ತ್ಯಾಜ್ಯ, ಕೋಳಿ ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸುರಿಯುತ್ತಿರುವುದರಿಂದ ವಾತಾವರಣ ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು. |
| ಆ) | ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚಿ ದಂಡ ವಿಧಿಸಲು ಕ್ರಮ ಜರುಗಿಸಲಾಗುವುದೇ, ರಿಂಗ್ ರಸ್ತೆ ಉದ್ದಕ್ಕೂ ಸಿ.ಸಿ. ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲು ಕ್ರಮ ಜರುಗಿಸಲಾಗುವುದೇ, ಇದರಿಂದ ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚುವುದರ ಜೊತೆಗೆ ಅಪರಾಧ ತಡೆಗೂ ಕೂಡಾ ಸಹಾಯವಾಗುವುದಲ್ಲವೇ ? | ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡಬಾರದೆಂದು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಹಾಗೂ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ 65 ವಾರ್ಡ್‌ಗಳಲ್ಲಿ ಮನೆ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮಾಡಲಾಗುತ್ತಿದೆ. ಈ ಕಾರ್ಯಕ್ಕಾಗಿ ಎಲ್ಲಾ 65 ವಾರ್ಡ್‌ಗಳಿಗೆ ಟಿಪ್ಪರ್ ವಾಹನಗಳನ್ನು ಒದಗಿಸಲಾಗಿದೆ ಹಾಗೂ ಎಲ್ಲೆಂದರಲ್ಲಿ ಕಸ ಬಿಸಾಡುವುದನ್ನು ತಡೆಯಲು ನಾಮಫಲಕಗಳನ್ನು ಸಹ ಅಳವಡಿಸಲಾಗಿದೆ.<br>ಮೈಸೂರು ನಗರದ ರಿಂಗ್ ರಸ್ತೆಯು ಮೈಸೂರು ಮಹಾನಗರ ಪಾಲಿಕೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಿಗೆ ಒಳಪಡುವುದರಿಂದ ಈ ಹಿಂದೆ ಕೆಲವು ವ್ಯಕ್ತಿಗಳು ರಿಂಗ್ ರಸ್ತೆಗಳಲ್ಲಿ ತ್ಯಾಜ್ಯವನ್ನು ಸುರಿಯುತ್ತಿರುವುದು ಕಂಡು ಬಂದ ಕಾರಣ ಮತ್ತು ಹಗಲಲ್ಲಿ ತ್ಯಾಜ್ಯ ಸುರಿಯುತ್ತಿರುವವರಿಗೆ ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ **"ಅಭಯ"** ತಂಡ ನಿಯೋಜಿಸಿ, ತ್ಯಾಜ್ಯವನ್ನು ಸುರಿಯುವವರಿಗೆ ದಂಡ ವಿಧಿಸಲಾಗುತ್ತಿದೆ ಮತ್ತು ರಾತ್ರಿ ವೇಳೆಯಲ್ಲಿ ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚಲು ಸಿ.ಸಿ. ಕ್ಯಾಮರಾಗಳನ್ನು ಈಗಾಗಲೇ ಅಳವಡಿಸಲಾಗಿದೆ. |

ನಅಇ 93 ಎಸಿಎಂ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು